# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 351 |
| ಸದಸ್ಯರ ಹೆಸರು | ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ: | 23-09-2020 |
| ಉತ್ತರಿಸುವ ಸಚಿವರು: | ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಇಲಾಖೆ |

| | | |
|---|---|---|
| ಅ) | ಪಿರಿಯಾಪಟ್ಟಣ ತಾಲ್ಲೂಕು, ಬೆಟ್ಟದಪುರ ವ್ಯಾಪ್ತಿಯ ರಾಜ್ಯ ಹೆದ್ದಾರಿಯಿಂದ, ಚಪ್ಪರದಹಳ್ಳಿ, ಹಾರನಹಳ್ಳಿ, ಅಂಬಲಾರೆಗೆ ಸಂಪರ್ಕ ಕಲ್ಪಿಸುವ ರಸ್ತೆಯು ಪೂರ್ತಿ ಹದಗೆಟ್ಟಿದ್ದು ವಾಹನ ಸಂಚಾರಕ್ಕೆ ಹಾಗೂ ಸಾರ್ವಜನಿಕರಿಗೆ ಹೆಚ್ಚು ಅನಾನುಕೂಲ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. ಸರ್ಕಾರದ ಗಮನಕ್ಕೆ ಬಂದಿದೆ. |
| ಆ) | ಕೂಡಲೇ ಈ ರಸ್ತೆಯನ್ನು ದುರಸ್ತಿ ಮಾಡಿ ವಾಹನಗಳ ಸುಗಮ ಸಂಚಾರಕ್ಕೆ ಮತ್ತು ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಿಕೊಡಲು ಕ್ರಮ ತೆಗೆದುಕೊಳ್ಳಲಾಗುವುದೇ.? | ಪಿರಿಯಾಪಟ್ಟಣ ತಾಲ್ಲೂಕು, ಗೊರಹಳ್ಳಿ-ಚಪ್ಪರದಹಳ್ಳಿ-ಅಂಬಲಾರೆ ರಸ್ತೆಯು ಒಂದು ಜಿಲ್ಲಾ ಮುಖ್ಯ ರಸ್ತೆಯಾಗಿರುತ್ತದೆ. ಸದರಿ ರಸ್ತೆಯು ಒಟ್ಟು 13.66 ಕಿ.ಮೀ ಉದ್ದವಿದೆ. ಸದರಿ ರಸ್ತೆಯ ಅಭಿವೃದ್ಧಿ ಕಾಮಗಾರಿಯನ್ನು ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆಯ ಹಂತ-4ರ ಪ್ಯಾಕೇಜ್ ಸಂಖ್ಯೆ -343 ರಡಿಯಲ್ಲಿ ರೂ.1558.37 ಲಕ್ಷಗಳ ಅಂದಾಜು ಮೊತ್ತದಲ್ಲಿ ಅಭಿವೃದ್ಧಿಪಡಿಸಲು ಟೆಂಡರ್ ಆಧಾರದ ಮೇಲೆ ಮೆ:ಅನ್ನಪೂರ್ಣೇಶ್ವರಿ ಕನ್ಸಟ್ರಕ್ಷನ್ಸ್ ಮೈಸೂರು ರವರಿಗೆ ವಹಿಸಿ, ಕಾಮಗಾರಿಯನ್ನು 11 ತಿಂಗಳಲ್ಲಿ ಪೂರ್ಣಗೊಳಿಸಲು ಸೂಚಿಸಲಾಗಿರುತ್ತದೆ. ಅದರನ್ವಯ ಸದರಿ ಕಾಮಗಾರಿಯನ್ನು ದಿನಾಂಕ: 11.06.2020 ರೊಳಗೆ ಪೂರ್ಣಗೊಳಿಸಬೇಕಾಗಿತ್ತು. ಆದರೆ ಕೋವಿಡ್-19ರ ಪೆಂಡಾಮಿಕ್ ಖಾಯಿಲೆಯಿಂದಾಗಿ ಕೆಲಸಗಾರರು ತಮ್ಮ ಊರುಗಳಿಗೆ ಮರಳಿರುವುದರಿಂದ ಕಾಮಗಾರಿ ಪೂರ್ಣಗೊಳಿಸಲು ಸಾಧ್ಯವಾಗಿರುವುದಿಲ್ಲವೆಂದು ಗುತ್ತಿಗೆದಾರರು ದಿನಾಂಕ: 01.06.2020 ರಂದು ಮನವಿ ನೀಡಿ, ಸದರಿ ಕಾಮಗಾರಿಯನ್ನು ಶೀಘ್ರವೆ ಪೂರ್ಣಗೊಳಿಸಲಾಗುವುದೆಂದು ಕೋರಿರುತ್ತಾರೆ. ಸದರಿ ಕಾಮಗಾರಿಯನ್ನು ಆದಷ್ಟು ಬೇಗನೆ ಪೂರ್ಣಗೊಳಿಸಲು ಕ್ರಮವಹಿಸಲಾಗುವುದು. |

ಲೋಇ 60 ಸಿಕ್ಯೂಎನ್ 2020(ಇ)

(ಗೋವಿಂದ ಎಂ. ಕಾರಜೋಳ)
ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ
ಮತ್ತು ಸಮಾಜ ಕಲ್ಯಾಣ ಇಲಾಖೆ